# ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಸಂಖ್ಯೆ: ಚುನಾವಣೆ/ವಿವ/16/2021-22

ಪ್ರಾದೇಶಿಕ ಆಯುಕ್ತರ ಕಛೇರಿ,
2ನೇ ಮಹಡಿ, ಬಿ.ಎಂ.ಟಿ.ಸಿ ಕಟ್ಟಡ,
ಕೆ.ಹೆಚ್.ರಸ್ತೆ, ಶಾಂತಿನಗರ,
ಬೆಂಗಳೂರು, ದಿನಾಂಕ:04-06-2022.

## ಅಧಿಕೃತ ಜ್ಞಾಪನ

**ವಿಷಯ:** 2022ನೇ ಸಾಲಿನಲ್ಲಿ ಪದಾವಧಿ ಮುಗಿಯಲಿರುವ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇದರ ಆಡಳಿತ ಮಂಡಳಿ ಮತ್ತು ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಕರಡು ಮತದಾರರ ಪಟ್ಟಿ ಪ್ರಕಟಿಸುವ ಕುರಿತು.

**ಉಲ್ಲೇಖ:1.** ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ರವರ ಆದೇಶದ ಸಂಖ್ಯೆ:ಸಚುಪ್ರಾ/ಆಡಳಿತ/ಸೌ.ಸ.ಚು.ನೇಮಕಾತಿ /23(1)/2021-22ದಿನಾಂಕ:04-03-2022.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆವಿ/ಚು-07/2021-22/226 ದಿನಾಂಕ: 13-05-2022.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆವಿ/ಚು-09/2021-22/300 ದಿನಾಂಕ: 25-05-2022.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆವಿ/ಚು-10/2022-23/335 ದಿನಾಂಕ: 01-06-2022.

********

ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರರವರ ಉಲ್ಲೇಖ(1)ರ ಆದೇಶದಂತೆ 2022ನೇ ಸಾಲಿನಲ್ಲಿ ಪದಾವಧಿ ಮುಗಿಯಲಿರುವ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ. ಬೆಂಗಳೂರು ಇದರ ಆಡಳಿತ ಮಂಡಳಿ ಮತ್ತು ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರುರವರನ್ನು ಚುನಾವಣಾಧಿಕಾರಿಗಳನ್ನಾಗಿ ನೇಮಕ ಮಾಡಿ ಆದೇಶಿಸಲಾಗಿರುತ್ತದೆ. ಅದರಂತೆ ಚುನಾವಣಾಧಿಕಾರಿಗಳು ಮತದಾರರ ಪಟ್ಟಿಗಳನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಪರಿಶೀಲಿಸಿ, ಚುನಾವಣಾ ದಿನಾಂಕದ 45 ದಿನಗಳ ಪೂರ್ವದಲ್ಲಿ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲು ಹಾಗೂ ಆಡಳಿತ ಮಂಡಳಿ ಹಾಗೂ ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಮುಂದಿನ ಅಗತ್ಯ ಕ್ರಮ ವಹಿಸಬೇಕಾಗಿರುತ್ತದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇವರು ಉಲ್ಲೇಖ(1)ರಿಂದ ಉಲ್ಲೇಖ(4)ರವರೆಗಿನ ಪತ್ರಗಳನ್ವಯ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರ ಸದಸ್ಯರ ಕರಡು ಪಟ್ಟಿ ಮತ್ತು ಮತದಾನದ ಹಕ್ಕನ್ನು ಹೊಂದಿರದ ಅನರ್ಹ ಸದಸ್ಯರ ಕರಡು ಪಟ್ಟಿ ಮತ್ತು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನಾಂಕಕ್ಕೆ ಸುಸ್ತಿಯಾಗುವಂತಹ ಮತದಾರರ ಕರಡು ಪಟ್ಟಿಗಳನ್ನು ಮತ್ತು ಡೆಲಿಗೇಟ್ ನಮೂನೆಗಳೊಂದಿಗೆ ದಾಖಲೆಗಳನ್ನು ಪರಿಶೀಲನೆಗೆ ಸಲ್ಲಿಸಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇವರು ಸಲ್ಲಿಸಿರುವ ಕರಡು ಮತದಾರರ ಪಟ್ಟಿಗಳನ್ನು ಮತ್ತು ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ, ಚುನಾವಣೆ ನಡೆಸಲು ನಿಯಮಾನುಸಾರ ಅಗತ್ಯವಿರುವ ಕಾಲಾವಕಾಶವನ್ನು ಗಮನದಲ್ಲಿಟ್ಟುಕೊಂಡು ದಿನಾಂಕ:24-07-2022ರಂದು ಚುನಾವಣಾ ದಿನಾಂಕವನ್ನು ನಿಗದಿಪಡಿಸಿ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇದರ ಚುನಾವಣೆ ನಡೆಸುವ ಬಗ್ಗೆ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರ ಸದಸ್ಯರ ಕರಡು ಪಟ್ಟಿ ಮತ್ತು ಮತದಾನದ ಹಕ್ಕನ್ನು ಹೊಂದಿರದ ಅನರ್ಹ ಸದಸ್ಯರ ಕರಡು ಪಟ್ಟಿ ಮತ್ತು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನಾಂಕಕ್ಕೆ ಸುಸ್ತಿಯಾಗುವಂತಹ ಮತದಾರರ ಕರಡು ಪಟ್ಟಿಗಳನ್ನು ಈ ಮೂಲಕ ಸಂಬಂಧಪಟ್ಟವರ ಗಮನಕ್ಕೆ ಪ್ರಕಟಿಸಲಾಗಿದೆ.

ಈ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ಈ ದಿನಾಂಕದಿಂದ ಮೂವತ್ತು ದಿನಗಳ ಒಳಗಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲಾವಕಾಶ ನೀಡಿದೆ. ಆಕ್ಷೇಪಣೆ ಸಲ್ಲಿಸಬಯಸುವ ಸದಸ್ಯರು/ ಸದಸ್ಯ ಸಹಕಾರಿಗಳು ಜಿಲ್ಲಾ ಚುನಾವಣಾಧಿಕಾರಿಗಳಿಗೆ/ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇದರ ವ್ಯವಸ್ಥಾಪಕ ನಿರ್ದೇಶಕರಿಗೆ ನಿಗದಿತ ಕಾಲಾವಧಿಯಲ್ಲಿ ನೇರವಾಗಿ ತಮ್ಮ ನಿರ್ದಿಷ್ಟ ಆಕ್ಷೇಪಣೆಗಳನ್ನು ಅಗತ್ಯ ಮತ್ತು ಪೂರಕ ದಾಖಲೆಗಳೊಂದಿಗೆ ಸಲ್ಲಿಸುವುದು. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇವರು ಆಕ್ಷೇಪಣೆಗಳ ಬಗ್ಗೆ ನಿಯಮಾನುಸಾರ ಮುಂದಿನ ಅಗತ್ಯ ಕ್ರಮ ವಹಿಸಲು ಸೂಚಿಸಿದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರು ಇದರೊಂದಿಗೆ ಲಗತ್ತಿಸಲಾಗಿರುವ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರ ಸದಸ್ಯರ ಕರಡು ಪಟ್ಟಿ ಮತ್ತು ಮತದಾನದ ಹಕ್ಕನ್ನು ಹೊಂದಿರದ ಅನರ್ಹ ಸದಸ್ಯರ ಕರಡು ಪಟ್ಟಿ ಮತ್ತು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನಾಂಕಕ್ಕೆ ಸುಸ್ತಿಯಾಗುವಂತಹ ಮತದಾರರ ಕರಡು ಪಟ್ಟಿಗಳನ್ನು ಸಂಯುಕ್ತ ಸಹಕಾರಿಯ ಸೂಚನಾ ಫಲಕದಲ್ಲಿ, ಸದಸ್ಯ ಸಹಕಾರಿಗಳ ಕಛೇರಿಗಳಲ್ಲಿ ಹಾಗೂ ನಿಯಮಾನುಸಾರ ಅನ್ವಯಿಸುವ ಇತರೆ ಶಾಖಾ ಕಛೇರಿಗಳಲ್ಲಿ ಪ್ರಕಟಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಂಡು, ಪ್ರಕಟಿಸಿದ ಬಗ್ಗೆ ತಕ್ಷಣವೇ ಈ ಕಛೇರಿಗೆ ವರದಿ ಸಲ್ಲಿಸಲು ಸೂಚಿಸಿದೆ.

ಪ್ರಾದೇಶಿಕ ಆಯುಕ್ತರು,
ಬೆಂಗಳೂರು ವಿಭಾಗ, ಬೆಂಗಳೂರು
ಹಾಗೂ ಚುನಾವಣಾಧಿಕಾರಿಗಳು.

ಪ್ರತಿಯನ್ನು:-

(1) ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
(2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಸೌಹಾರ್ದ ಸಹಕಾರಿ ಸೌಧ" ನಂ. 68, 1ನೇ ಮಹಡಿ, 17 & 18ನೇ ಅಡ್ಡರಸ್ತೆ ಮಧ್ಯೆ, ಮಾರ್ಗೋಸಾ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560055 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
(3) ಕಛೇರಿ ಪ್ರತಿ.

Recived
KSSFCL Ho. Blore
Jr. manager

ರವಾನಿಸಿದೆ
ದಿನಾಂಕ: 06/06/2022